# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1175 |
| ಸದಸ್ಯರ ಹೆಸರು | : | ಡಾ.ತಾಳವಾರ್ ಸಾಬಣ್ಣ (ನಾಮ ನಿರ್ದೇಶನ ಹೊಂದಿದವರು) |
| ಉತ್ತರಿಸಬೇಕಾದ ದಿನಾಂಕ | : | 17.12.2025 |
| ಉತ್ತರಿಸಬೇಕಾದ ಸಚಿವರು | : | ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಬೀದರನ ಪಶು ವೈದ್ಯಕೀಯ ವಿಜ್ಞಾನಗಳ ವಿಶ್ವವಿದ್ಯಾಲಯದಲ್ಲಿ ಎನ್‌ಪಿಎ (ನಾನ್ ಪ್ರಾಕ್ಟಿಸಿಂಗ್ ಅಲೋವೆನ್ಸಸ್) ಸೌಲಭ್ಯ ಜಾರಿಗೆ ತರುವುದಾಗಿ ಬೋಧಕ ಸಿಬ್ಬಂದಿಯಿಂದ ವಿಶ್ವವಿದ್ಯಾಲಯದ ಅಧಿಕಾರಿಗಳು ಹಣ ಸಂಗ್ರಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ಬಂದಿರುವುದಿಲ್ಲ. |
| ಆ) | ಸರ್ಕಾರದಿಂದ ಆದೇಶವಾಗದಿದ್ದರೂ ಆದೇಶವಾಗಿದೆ ಎಂದು ವಿಶ್ವವಿದ್ಯಾಲಯ ಮತ್ತು ಪಶುವೈದ್ಯಕೀಯ ಕಾಲೇಜುಗಳ ಬೋಧಕ ಸಿಬ್ಬಂದಿಯಿಂದ ಅಕ್ರಮವಾಗಿ ಹಣ ಪಡೆದವರ ಮತ್ತು ವಂಚಿಸಿದ ಅಧಿಕಾರಿಗಳ ವಿರುದ್ಧ ತನಿಖೆ ಕೈಗೊಂಡು ಕಠಿಣ ಕ್ರಮ ಕೈಗೊಳ್ಳಬಹುದೇ; | ಸರ್ಕಾರದ ಆದೇಶ ಸಂಖ್ಯೆ:AHF 113 VET 2018 ಬೆಂಗಳೂರು, ದಿನಾಂಕ:16-03-2019 ಮತ್ತು ಸರ್ಕಾರದ ಪತ್ರ ಸಂಖ್ಯೆ: ಪಸಂಮೀ 113 ಪಲಸೇ 2018 (ಭಾಗ-1), ದಿನಾಂಕ:13-05-2019 ರನ್ವಯ ಕರ್ನಾಟಕ ಪಶುವೈದ್ಯಕೀಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಬೀದರ ಇಲ್ಲಿನ ಬೋಧಕ ಸಿಬ್ಬಂದಿಯವರಿಗೆ ದಿನಾಂಕ:01-01-2016 ರಿಂದ ಪೂರ್ವಾನ್ವಯವಾಗುವಂತೆ 7ನೇ ವೇತನ ಹಾಗೂ ಎನ್‌ಪಿಎ ಸೌಲಭ್ಯವನ್ನು ವಿಸ್ತರಿಸಲಾಗಿರುತ್ತದೆ.<br><br>ಆದುದರಿಂದ, ಅಧಿಕಾರಿಗಳ ವಿರುದ್ಧ ಕ್ರಮಕೈಗೊಳ್ಳುವ ಪ್ರಮೇಯ ಉದ್ಭವಿಸುವುದಿಲ್ಲ. |
| ಇ) | ಗುತ್ತಿಗೆ ಆಧಾರದ ಮೇಲೆ 51 ಮಂದಿಯ ನೇಮಕ ಮಾಡಿಕೊಳ್ಳಲಾಗಿದೆ ಎಂದು ನೇಮಕಾತಿ ಆದೇಶವು ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡಿಸಿದವರ ಮೇಲೆ ಸರ್ಕಾರ ಕ್ರಮ ಕೈಗೊಳ್ಳದಿರಲು ಕಾರಣಗಳೇನು: | ಕರ್ನಾಟಕ ಪಶುವೈದ್ಯಕೀಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಬೀದರ ಇಲ್ಲಿ ಗುತ್ತಿಗೆ ಆಧಾರದ ಮೇಲೆ 51 ಮಂದಿಯ ನೇಮಕಾತಿ ಸುಳ್ಳು ಆದೇಶವು ಸಾಮಾಜಿಕ ಜಾಲತಾಣದಲ್ಲಿ ಹರಿದಾಡಿಸಿರುವವರ ಬಗ್ಗೆ ಈ ಕೆಳಗಿನಂತೆ ಕ್ರಮವಹಿಸಲಾಗಿದೆ:-<br><br>1. ವಿಶ್ವವಿದ್ಯಾಲಯದ ವತಿಯಿಂದ ಸಾರ್ವಜನಿಕರು ಈ ತರಹದ ಸುಳ್ಳು ಮಾಹಿತಿಗೆ ಹಾಗೂ ನಕಲಿ ನೇಮಕಾತಿ ಅದೇಶಗಳಿಗೆ ಮೋಸ ಹೋಗಬಾರದೆಂದು ವಿಶ್ವವಿದಾಲಯದ ಅಧಿಕೃತ ಅಂತರ್ಜಾಲ ಹಾಗೂ ಪತ್ರಿಕಾ ಪ್ರಕಟಣೆ ಹೊರಡಿಸಲಾಗಿದೆ.<br>2. ಈ ಪ್ರಕರಣ ಕುರಿತು ವಿಶ್ವವಿದ್ಯಾಲಯದ ಮಟ್ಟದಲ್ಲಿ ಅಂತರಿಕ ವಿಚಾರಣಾ ಸಮಿತಿ ರಚಿಸಲಾಗಿದ್ದು, ಸದರಿ ಸಮಿತಿಯು ನಕಲಿ ಆದೇಶ ಪ್ರಕರಣ ಕುರಿತು ಸಾಮಾಜಿಕ ಜಾಲತಾಣದಲ್ಲಿ ಲಭ್ಯವಾಗಿರುವ ದಾಖಲಾತಿಗಳನ್ನು ಪರಿಶೀಲಿಸಿ ಸದರಿ ನಕಲಿ ನೇಮಕಾತಿ ಅದೇಶದಿಂದ ಮೋಸ ಹೋದವರು ಯಾರು ದೂರು ಸಲ್ಲಿಸದಲ್ಲಿ ನಿಯಮಾನುಸಾರ ಪರಿಶೀಲಿಸಿ ವಿಶ್ವವಿದ್ಯಾಲಯವು ಮುಂದಿನ ಕಾನೂನು ಕ್ರಮ |

| | | |
|---|---|---|
| | | ಜರುಗಿಸಲು ಶಿಫಾರಸ್ಸು ಮಾಡಿರುತ್ತದೆ.<br><br>3. ಸದರಿ ವಿಷಯದ ಕುರಿತು ವಿಶ್ವವಿದ್ಯಾಲಯದಲ್ಲಿ ಅವಶ್ಯಕ ದಾಖಲಾತಿಗಳು ಲಭ್ಯವಾಗಿಲ್ಲದಿರುವದರಿಂದ ಹಾಗೂ ಸದರಿ ನಕಲಿ ಆದೇಶದಿಂದ ವಂಚಿತರು ಯಾರು ದೂರು ಸಲ್ಲಿಸದೇ ಇರುವುದರಿಂದ ಯಾವುದೇ ಕಾನೂನು ಕ್ರಮ ಜರುಗಿಸಲು ಸಾಧ್ಯವಾಗಿರುವುದಿಲ್ಲ. ಮುಂದುವರೆದು ಈ ಪ್ರಕರಣ ಕುರಿತು ವಂಚಿತರು ದೂರು ಸಲ್ಲಿಸಿದ್ದಲ್ಲಿ ಮುಂದಿನ ಕಾನೂನು ಕ್ರಮ ಜರುಗಿಸಲಾಗುವುದು |
| ಈ) | ಬೆಳೆಯುವ ಹಂತದಲ್ಲಿಯೇ ಬೀದರಿನ ಪಶು ವೈದ್ಯಕೀಯ ವಿಶ್ವವಿದ್ಯಾಲಯದಲ್ಲಿ ಆಕ್ರಮಗಳು ನಡೆಯುತ್ತಿರುವುದು ಕಟ್ಟಡಗಳು/ ಲ್ಯಾಬೋರೆಟರಿಗಳ ಕೊರತೆ ಮತ್ತು ಬೋಧಕ-ಬೋಧಕೇತರ ಸಿಬ್ಬಂದಿಗಳ ಕೊರತೆಯಂತಹ ಸಮಸ್ಯೆಗಳಿಗೆ ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ? | ಕರ್ನಾಟಕ ಪಶುವೈದ್ಯಕೀಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಬೀದರ ಇದರ ಅಡಿಯಲ್ಲಿ ಬರುವ ಪಶುವೈದ್ಯಕೀಯ, ಹೈನುಗಾರಿಕೆ ಮತ್ತು ಮೀನುಗಾರಿಕೆ ವಿದ್ಯಾಲಯಗಳಲ್ಲಿ ಕಟ್ಟಡ ಹಾಗೂ ಲ್ಯಾಬೋರೆಟರಿಗಳ ಕೊರತೆಯಾಗಿರುವುದಿಲ್ಲ. ಸದರಿ ಮಹಾವಿದ್ಯಾಲಯಗಳಿಂದ ಗುಣಮಟ್ಟದ ಶಿಕ್ಷಣವನ್ನು ಸ್ನಾತಕ/ಸ್ನಾತಕೋತ್ತರ ಪದವಿ ಮತ್ತು Doctoral ಪದವಿಗಳನ್ನು ನೀಡಲಾಗುತ್ತಿದೆ. ಅಲ್ಲದೆ ಪಶುವೈದ್ಯಕೀಯ, ಹೈನುಗಾರಿಕೆ ಮತ್ತು ಮೀನುಗಾರಿಕೆ ಕ್ಷೇತ್ರಗಳ ಸಂಶೋಧನೆ ಮತ್ತು ವಿಸ್ತರಣಾ ಚಟುವಟಿಕೆಗಳನ್ನು ಸಮರ್ಪಕವಾಗಿ ಮಾಡಲಾಗುತ್ತಿದೆ. ಬೋಧಕ ಹುದ್ದೆಗಳ ಕೊರತೆಯ ಎದುರಾಗಿ ಪಶು ಪಾಲನಾ ಮತ್ತು ಪಶುವೈದ್ಯ ಸೇವಾ ಇಲಾಖೆಯಿಂದ ನಿಯೋಜನೆಗೊಂಡ ತಜ್ಞರು ಹಾಗೂ ಗುತ್ತಿಗೆ ಆಧಾರದ ಮೇಲೆ ನೇಮಕಗೊಂಡ ಬೋಧಕರು ಬೋಧನೆಯಲ್ಲಿ ತೊಡಗಿಕೊಂಡಿರುತ್ತಾರೆ. ಬೋಧಕೇತರ ಸಿಬ್ಬಂದಿಗಳ ಕೊರತೆಗೆ ಅನುಗುಣವಾಗಿ ಗುತ್ತಿಗೆ ಆಧಾರದ ಮೇಲೆ ಸಿಬ್ಬಂದಿಗಳನ್ನು ನೇಮಕ ಮಾಡಿಕೊಂಡು ವಿಶ್ವವಿದ್ಯಾಲಯದ ಚಟುವಟಿಕೆಗಳನ್ನು ನಡೆಸಲಾಗುತ್ತಿದೆ. ಮುಂದುವರೆದು, ವಿಶ್ವವಿದ್ಯಾಲಯದಲ್ಲಿ ಖಾಲಿಯಿರುವ ಬೋಧಕ ಮತ್ತು ಬೋಧಕೇತರ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳುವ ಪ್ರಕ್ರಿಯೆ ಜಾರಿಯಲ್ಲಿದೆ. |

**ಸಂಖ್ಯೆ:ಪಸಂಮೀ 444 ಪಲಸೇ 2025**

**(ಕೆ. ವೆಂಕಟೇಶ್)**
ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು